ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 977 |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ |
| ಉತ್ತರಿಸುವ ದಿನಾಂಕ | : | 21/12/2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಹಾಗೂ ಪುರಸಭೆಗಳನ್ನು ನಗರ ಸಭೆಗಳಾಗಿ ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರಕ್ಕಿದೆ; | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿನ ಯಾವುದೇ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಹಾಗೂ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ.<br><br>ಮೈಸೂರು ಮತ್ತು ಚಾಮರಾಜನಗರ ಜಿಲ್ಲಾಧಿಕಾರಿಗಳಿಂದ ಸೂಕ್ತ ಮತ್ತು ಅರ್ಹ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುತ್ತದೆ. |
| ಆ) | ಈ ಬಗ್ಗೆ ಪ್ರಸ್ತಾವನೆಗಳೇನಾದರೂ ಸರ್ಕಾರಕ್ಕೆ ಬಂದಿವೆಯೇ; | |
| ಇ) | ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು? | ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ-349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>1. ಅಂತಹ ಪ್ರದೇಶದ ಜನಸಂಖ್ಯೆಯು 10,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000 ಕ್ಕೆ ಹೆಚ್ಚಿಲ್ಲದಂತಿರಬೇಕು;<br>2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು;<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.<br><br>ಅಲ್ಲದೇ ಅಂಥ ಪ್ರದೇಶದಲ್ಲಿ ತಾಲ್ಲೂಕು ಕೇಂದ್ರ ಕಾರ್ಯಸ್ಥಾನವು ಇದ್ದಲ್ಲಿ, ಆ ಪ್ರದೇಶವು 10,000 ಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ಆ ಪ್ರದೇಶವನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಬಹುದು.<br><br>ದಿನಾಂಕ:19/03/2015 ರ ಸಚಿವ ಸಂಪುಟ ಸಭೆಯ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗಿರುತ್ತದೆ. |

.....2...